ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/05/ಇಸಿಎಸ್(1)/2024

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು-560001
ದೂರವಾಣಿ ಸಂಖ್ಯೆ: 080-22200777
ದಿನಾಂಕ:12.07.2024

**ಸುತ್ತೋಲೆ**

ವಿಷಯ: 2024-25 ಶೈಕ್ಷಣಿಕ ವರ್ಷದಲ್ಲಿನ ಡಿಪ್ಲೋಮ ಕೋರ್ಸ್‌ಗಳ ನಿಗದಿತ ಪಠ್ಯಕ್ರಮಗಳನ್ನು ವಿಶೇಷ ತರಗತಿಗಳನ್ನು ಜರುಗಿಸಿ ಪೂರ್ಣಗೊಳಿಸುವ ಬಗ್ಗೆ.

ಉಲ್ಲೇಖ:1. ಈ ಕಛೇರಿ ಸುತ್ತೋಲೆ ಸಂಖ್ಯೆ:DTE-ADM10ACM2/45/2024 ದಿನಾಂಕ:18.06.2024
2. ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/05/ಇಸಿಎಸ್(1)/2024 ದಿನಾಂಕ:19.06.2024

************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಸುತ್ತೋಲೆಯಲ್ಲಿ 2024-25 ಶೈಕ್ಷಣಿಕ ವರ್ಷದಲ್ಲಿ ಡಿಪ್ಲೋಮ ಕೋರ್ಸ್‌ಗಳ ತರಗತಿಗಳು, ಸೆಮಿಸ್ಟರ್ ಥಿಯರಿ/ಪ್ರಾಯೋಗಿಕ ಪರೀಕ್ಷೆಗಳು, ಇತ್ಯಾದಿ ಶೈಕ್ಷಣಿಕ ಚಟುವಟಿಕೆಗಳ ಬಗ್ಗೆ ಶೈಕ್ಷಣಿಕ ವೇಳಾಪಟ್ಟಿ ನೀಡಲಾಗಿದೆ. ಇದರ ಭಾಗವಾಗಿ ಈಗಾಗಲೇ ಸಂಸ್ಥೆಗಳಲ್ಲಿ ಪ್ರಥಮ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ Induction Program ಒಳಗೊಂಡಂತೆ ಇತರೆ ಎಲ್ಲಾ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ.

ಪ್ರಸ್ತುತ July 2024 Makeup ಪ್ರಾಯೋಗಿಕ ಪರೀಕ್ಷೆಗಳು ಈಗಾಗಲೇ ಜರುಗುತ್ತಿದ್ದು, ಥಿಯರಿ ಪರೀಕ್ಷೆಗಳು ದಿನಾಂಕ:15.07.2024 ರಿಂದ 26.07.2024 ರವರೆಗೆ ಜರುಗಲಿವೆ. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗುವ ಸಂಭವವಿರುವುದರಿಂದ, ಎಲ್ಲಾ ವಿಭಾಗದ ವಿಭಾಗಾಧಿಕಾರಿಗಳು ಉಪನ್ಯಾಸಕರ ಸಹಕಾರ ಪಡೆದು ವಿಶೇಷ ತರಗತಿಗಳ ವೇಳಾಪಟ್ಟಿಯನ್ನು ರಚಿಸಿ ಪ್ರಾಂಶುಪಾಲರ ಅನುಮತಿ ಪಡೆದು ತರಗತಿಗಳನ್ನು ನಡೆಸುವ ನಿಟ್ಟಿನಲ್ಲಿ ಕ್ರಮವಹಿಸಿ ಪಾಠ ಪ್ರವಚನಗಳನ್ನು ಸಂಪೂರ್ಣಗೊಳಿಸಲು ಅಗತ್ಯ ಕ್ರಮವಹಿಸುವುದು.

ಸದರಿ ವಿಶೇಷ ವೇಳಾಪಟ್ಟಿಯ ಅನುಸಾರ ಪಾಠ ಪ್ರವಚನಗಳನ್ನು ಸಂಪೂರ್ಣಗೊಳಿಸಿರುವ ಬಗ್ಗೆ ಪ್ರಾಂಶುಪಾಲರು btejedexam@gmail.com ಇ-ಮೇಲ್ ವಿಳಾಸಕ್ಕೆ ತಪ್ಪದೇ ಮಾಹಿತಿ ನೀಡಲು ಸೂಚಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದಲ್ಲಿನ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನ ರಹಿತಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು- ಅಗತ್ಯ ಕ್ರಮಕ್ಕಾಗಿ.

ಪ್ರತಿ,
1) ನಿರ್ದೇಶಕರ ಆಪ್ತಶಾಖೆ
2) ಕಾರ್ಯದರ್ಶಿಯವರ ಆಪ್ತ ಶಾಖೆ
3) ಇ - ಗವರ್ನೆನ್ಸ್ ವಿಭಾಗಕ್ಕೆ - ವೆಬ್‌ಸೈಟ್ ನಲ್ಲಿ ಪ್ರಕಟಿಸಲು
4) ಗಣಕ ಕೇಂದ್ರಕ್ಕೆ - ವೆಬ್ ಪೋರ್ಟಲ್ ನಲ್ಲಿ ಪ್ರಕಟಿಸಲು